ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಶುಕ್ರವಾರ, ದಿನಾಂಕ : 29 ನೇ ಜನವರಿ, 2021

ಪಶುಸಂಗೋಪನೆ ಅಭಿವೃದ್ಧಿಗೆ ಬಿಡುಗಡೆಯಾದ ಅನುದಾನ ಕುರಿತು

ಶ್ರೀ ಹೆಚ್. ಎಂ. ರಮೇಶಗೌಡ(ವಿಧಾನಸಭೆಯಿಂದ ಚುನಾಯಿತರಾದವರು) -

32 (01) ಮಾನ್ಯ ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) 2019-20 ಹಾಗೂ 2020-21ನೇ ಸಾಲಿನಲ್ಲಿ ಪಶುಸಂಗೋಪನೆ ಅಭಿವೃದ್ಧಿಗೆ ಘೋಷಿಸಿದ ಹಣವೆಷ್ಟು; ಆ ಪೈಕಿ ಬಿಡುಗಡೆಯಾದ ಹಾಗೂ ಖರ್ಚಾದ ಹಣವೆಷ್ಟು;

(ಆ) ಹಸು, ಹಂದಿ, ಕುರಿ ಆಡು ಮೊಲ ಸಾಕಾಣಿಕೆ ಮತ್ತು ಕುಕ್ಕುಟೋದ್ಯಮ ಇತ್ಯಾದಿಗಳಿಗೆ ಕಳೆದ ಎರಡು ವರ್ಷಗಳಲ್ಲಿ ಖರ್ಚಾದ ಹಣವೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಹಸು ಸತ್ತರೇ ಸಿಗುವ ಪರಿಹಾರ ಎಮ್ಮೆ ಸತ್ತರೆ ಸಿಗುವುದಿಲ್ಲ ಎನ್ನುವ ರಾಜ್ಯದ ಜಾನುವಾರು ಸಾಕುವವರ ಕೂಗು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು;

(ಈ) ಗ್ರಾಮೀಣ ಪ್ರದೇಶದ ರೈತರಿಗೆ ಮತ್ತು ನಿರುದ್ಯೋಗಿ ಯುವಕರಿಗೆ ಪಶುಸಂಗೋಪನೆಯ ತರಬೇತಿ ಮತ್ತು ಸಹಾಯಧನ ಮುಂತಾದ ಪ್ರೋತ್ಸಾಹ ನೀಡುವ ಯೋಜನೆ ಸರ್ಕಾರದ ಮುಂದಿದೆಯೇ?